# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1184(1370) |
| ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ |
| ಉತ್ತರಿಸುವ ದಿನಾಂಕ | 18-03-2020 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ Organic Farming ಪದ್ಧತಿಯನ್ನು ಅನುಸರಿಸುತ್ತಿರುವ ರೈತರ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗಣನೆಗೆ ಇಲ್ಲದ ನೀತಿಯಿಂದ, ದುಬಾರಿ ಬೆಲೆಯ ಗೊಬ್ಬರ ಗೋಡು ಬಳಸುವಿಕೆಯಿಂದ ಹಾಗೂ ಉತ್ಪನ್ನ ವಸ್ತುಗಳಿಗೆ ವ್ಯವಸಾಯ ಮಾರುಕಟ್ಟೆ ಇಲ್ಲದೆ ಇರುವುದರಿಂದ ರೈತರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು; | ರಾಜ್ಯದಲ್ಲಿ ಸಾವಯವ ಕೃಷಿ ನೀತಿ, 2004ರಡಿ ಉತ್ತೇಜಿಸಲಾಗುತ್ತಿರುವ ಸಾವಯವ ಕೃಷಿ ಪದ್ಧತಿಯಲ್ಲಿ ಯಾವುದೇ ರೀತಿಯ ದುಬಾರಿ ದರ ನೀಡಿ ಖರೀದಿಸುವ ರಸಗೊಬ್ಬರ ಬಳಕೆಗೆ ಒತ್ತು ನೀಡದೆ ಕ್ಷೇತ್ರದಲ್ಲಿಯೇ ಉತ್ಪಾದಿಸಲಾಗುವ ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರ, ಜೀವಾಮೃತ, ಬೀಜಾಮೃತ ಇಂತಹವುಗಳನ್ನು ಬಳಸಿ ಬೆಳೆ ಉತ್ಪಾದನೆ ಕೈಗೊಳ್ಳುವುದು ಸಾವಯಪ ಕೃಷಿಯ ಮೂಲ ತತ್ವವಾಗಿರುತ್ತದೆ.<br>ಸಾವಯವ ಕೃಷಿ ಅಳವಡಿಸಿಕೊಂಡ ರೈತರು ಉತ್ಪಾದಿಸುವ ಸಾವಯವ ಉತ್ಪನ್ನಗಳಿಗೆ ವ್ಯವಸ್ಥಿತ ಮಾರುಕಟ್ಟೆಯನ್ನು ಒದಗಿಸುವ ಸಲುವಾಗಿ ರಾಜ್ಯಾದ್ಯಂತದ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ ರಾಜ್ಯಾದ್ಯಂತ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು ರಚಿಸಲಾಗಿರುತ್ತದೆ. ಒಕ್ಕೂಟಗಳ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ. ಈ ಒಕ್ಕೂಟಗಳ ಮುಖಾಂತರ ಸಾವಯವ ಕೃಷಿ ಉತ್ಪನ್ನಗಳ ಸಂಗ್ರಹಣೆ, ಗ್ರೇಡಿಂಗ್, ಮೌಲ್ಯವರ್ಧನೆ, ಸಂಸ್ಕರಣೆ, ಪ್ಯಾಕಿಂಗ್, ಬ್ರಾಂಡ್ ಅಭಿವೃದ್ಧಿ, ಮಾರುಕಟ್ಟೆ, ಬಳಕೆದಾರರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಈ ಮುಂತಾದ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ. |
| ಆ) | ರಾಜ್ಯದಲ್ಲಿ Organic Farming ಪದ್ಧತಿಯನ್ನು ಅನುಸರಿಸುತ್ತಿರುವ ರೈತರ ಹಿತದೃಷ್ಟಿ ಕಾಪಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಯಾವುದಾದರು ವಿಶೇಷ ಪ್ಯಾಕೇಜುಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು; | ರಾಜ್ಯದಲ್ಲಿ ಸಾವಯವ ಕೃಷಿಯನ್ನು ಪ್ರೋತ್ಸಾಹಿಸಲು ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಸಾವಯವ ಕೃಷಿ ನೀತಿಯನ್ನು 2004ನೇ ಸಾಲಿನಲ್ಲಿಯೇ ಜಾರಿಗೆ ತಂದ ಹೆಮ್ಮೆ ಕರ್ನಾಟಕ ರಾಜ್ಯಕ್ಕೆ ಸೇರುತ್ತದೆ. ಸಾವಯವ ಕೃಷಿ ನೀತಿಯನ್ವಯ ಪ್ರಮುಖವಾಗಿ "ಸಾವಯವ ಗ್ರಾಮ/ಸ್ಥಳ ಯೋಜನೆ" ತದನಂತರ ಮತ್ತಷ್ಟು ಪರಿಷ್ಕರಣೆಗಳೊಂದಿಗೆ "ಸಾವಯವ ಭಾಗ್ಯ ಯೋಜನೆ"ಯನ್ನು ರಾಜ್ಯದ ಎಲ್ಲಾ ಹೋಬಳಿಗಳಲ್ಲಿ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗಿದೆ. ಯೋಜನೆಯು 100ಹೆಕ್ಟೇರ್ ಪ್ರದೇಶದ ಗುಚ್ಛ ಮಾದರಿಯ (ಕ್ಲಸ್ಟರ್ ) ಕಾರ್ಯಕ್ರಮವಾಗಿದ್ದು, ಪ್ರತಿ ಕ್ಲಸ್ಟರ್ ನಲ್ಲಿನ ರೈತರುಗಳನ್ನು ಸಾವಯವ |

ಕೃಷಿಕರ ಸಂಘಗಳಾಗಿ ನೋಂದಾಯಿಸಲಾಗಿದೆ. ಮುಂದುವರೆದು, ಸದರಿ ಪ್ರದೇಶವನ್ನು ಸಾವಯವ ಪ್ರಮಾಣೀಕರಣಕ್ಕೆ ನೋಂದಾಯಿಸಲಾಗಿದೆ.

ಪ್ರತಿ 100 ಹೆಕ್ಟೇರ್ ಕ್ಲಸ್ಟರ್ ನಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ.

- ರೈತರಿಗೆ ತರಬೇತಿ, ಸಾಮರ್ಥ್ಯವೃದ್ಧಿ, ಅಧ್ಯಯನ ಪ್ರವಾಸ ಮತ್ತು ಕ್ಷೇತ್ರೋತ್ಸವ
- ಪ್ರಚಾರ- ಕರ ಪತ್ರ, ಬಿತ್ತಿ ಪತ್ರ, ಗೋಡೆ ಬರಹ, ಸಿ.ಡಿ, ವಸ್ತು ಪ್ರದರ್ಶನ, ಕಿರು ಹೊತ್ತಿಗೆ ಪ್ರಕಟಣೆ/ಖರೀದಿ ಇತ್ಯಾದಿ
- ಸಾವಯವ ಸಂಪನ್ಮೂಲ ವೃದ್ಧಿ, ಜೀವವೈವಿಧ್ಯತೆ ಮತ್ತು ಪೋಷಕಾಂಶ ನಿರ್ವಹಣೆ
- ಸಾವಯವ ಗೊಬ್ಬರ ಉತ್ಪಾದನಾ ಘಟಕಗಳ ಸ್ಥಾಪನೆ
- ಸಾವಯವ ಬಿತ್ತನೆ ಬೀಜ ಮತ್ತು ತೋಟಗಾರಿಕಾ ಬೆಳೆಗಳ ಸಸಿಗಳ ವಿತರಣೆ,
- ಪಶುಸಂಗೋಪನೆ ಮತ್ತು ಇತರೆ ಉಪಕಸುಬುಗಳಿಗೆ ಪ್ರೋತ್ಸಾಹ
- ಕೀಟ ಮತ್ತು ರೋಗ ನಿರ್ವಹಣೆ
- ಸಮುದಾಯ ಬೀಜ ಬ್ಯಾಂಕ್, ಸಮುದಾಯ ಗ್ರಂಥಾಲಯ, ಸ್ಥಾಪನೆ
- ಪ್ರಚಾರ, ಗ್ರಾಹಕರಲ್ಲಿ ಜಾಗೃತಿ, ಪೋಟೋ ಮತ್ತು ವಿಡಿಯೋ ದಾಖಲಾತಿ,
- ಸಾವಯವ ಪ್ರಮಾಣೀಕರಣ ಮತ್ತು ಆಂತರಿಕ ನಿಯಂತ್ರಣ ವ್ಯವಸ್ಥೆ
- ರೈತರ ಗುಂಪುಗಳ ನೋಂದಣಿ
- ಸಾವಯವ ಕೃಷಿ ಉತ್ಪನ್ನಗಳ ಮಾರುಕಟ್ಟೆ ಅಭಿವೃದ್ಧಿ

2016-17ನೇ ಸಾಲಿನಲ್ಲಿ ಮೇಲಿನ ಯೋಜನೆಗಳಡಿ ರಾಜ್ಯಾದ್ಯಂತ ಸ್ಥಾಪಿತವಾದ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ ರಾಜ್ಯಾದ್ಯಂತ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು ರಚಿಸಲಾಗಿರುತ್ತದೆ. ಒಕ್ಕೂಟಗಳ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ. ಒಕ್ಕೂಟಗಳ ಮೂಲಕ ಸದಸ್ಯರು ಉತ್ಪಾದಿಸಿದ ಸಾವಯವ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ಚಟುವಟಿಕೆಗಳಿಗೆ ಒತ್ತು ನೀಡಲಾಗಿದೆ.

2017-18ನೇ ಸಾಲಿನಿಂದ ಒಕ್ಕೂಟಗಳ ಮುಖಾಂತರ "ಮಾರುಕಟ್ಟೆ ಬೇಡಿಕೆ ಆಧಾರಿತ ನಿರ್ದಿಷ್ಟ ಸಾವಯವ ಬೆಳೆ ಕ್ಲಸ್ಟರ್ ಗಳ ಅಭಿವೃದ್ಧಿ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.

2018-19ನೇ ಸಾಲಿನಲ್ಲಿ ರಾಜ್ಯದ ಎಲ್ಲಾ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ ಕರ್ನಾಟಕ ರಾಜ್ಯ ಸಹಕಾರ ಸಾವಯವ ಉತ್ಪನ್ನಗಳ ಮಾರಾಟ ಮಹಾಮಂಡಳ ನಿಯಮಿತವನ್ನು ಸ್ಥಾಪಿಸಲಾಗಿದೆ. ಇದೇ ಸಾಲಿನಲ್ಲಿ ಇದ್ದ ಸಾವಯವ

| | | |
|---|---|---|
| | | ಪ್ರಮಾಣೀಕರಣ ಪ್ರದೇಶವನ್ನು 1 ಲಕ್ಷ ಹೆಕ್ಟೇರ್ ನಿಂದ ಮುಂದಿನ ಮೂರು ವರ್ಷಗಳಲ್ಲಿ 1.50 ಲಕ್ಷ ಹೆಕ್ಟೇರ್ ಗೆ ವಿಸ್ತರಿಸುವ "ಸಾವಯವ ಕೃಷಿ ಅಳವಡಿಕೆ ಮತ್ತು ದೃಡೀಕರಣ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಆಯ್ಕೆಯಾದ ಅರ್ಹ ವ್ಯಕ್ತಿಗತ ಹಾಗೂ ಗುಂಪುಗಳ ಪ್ರಸ್ತಾವನೆಗಳನ್ನು ಸಾವಯವ ಪ್ರಮಾಣೀಕರಣಕ್ಕೆ ಒಳಪಡಿಸಿ, ಸಾವಯವ ಕೃಷಿಗೆ ಪೂರಕವಾದ ಎರೆಹುಳ ಗೊಬ್ಬರ ತಯಾರಕ ಘಟಕ, ಬಯೋಡೈಜಿಸ್ಟರ್ ಹಾಗೂ ರಾಸುಗಳ ನಿರ್ವಹಣೆಗೆ ನೆಲಹಾಸು ನಿರ್ಮಿಸಲು ಶೇ.75ರ ಸಹಾಯಧನ ಒದಗಿಸಲಾಗುತ್ತಿದೆ.<br>ಇದಲ್ಲದೇ, ರಾಜ್ಯದ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಒದಗಿಸುವ ನಿಟ್ಟಿನಲ್ಲಿ ಸಾವಯವ ಮೇಳವನ್ನು ಜಿಲ್ಲಾ/ ರಾಜ್ಯ/ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಹ ಆಯೋಜಿಸಲಾಗಿದೆ. |
| ಇ) | ರಾಜ್ಯದಲ್ಲಿ Organic Farming ಬಗ್ಗೆ ಅರಿವು ಮೂಡಿಸಲು ಹಾಗೂ ರೈತರು ಬೆಳೆಯುವ ಬೆಳೆಗಳಿಗೆ ಉಪಯೋಗಿಸುವ ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಬಳಕೆ ತಗ್ಗಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕಾರ್ಯಕ್ರಮಗಳು/ ಯೋಜನೆಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಸಾವಯವ ಕೃಷಿಯ ಬಗ್ಗೆ ರೈತರಿಗೆ ಹಾಗೂ ಗ್ರಾಹಕರಿಗೆ ಅರಿವು ಮೂಡಿಸಲು ಹಾಗೆಯೇ, ರಾಜ್ಯದ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಒದಗಿಸುವ ನಿಟ್ಟಿನಲ್ಲಿ ಸಾವಯವ ಮೇಳಗಳನ್ನು ಜಿಲ್ಲಾ/ ರಾಜ್ಯ/ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿಯೂ ಸಹ ಆಯೋಜಿಸಲಾಗಿದೆ. ಕೃಷಿ ವಿಶ್ವವಿದ್ಯಾನಿಲಯಗಳು ಆಯೋಜಿಸುವ ಕೃಷಿ ಮೇಳಗಳಲ್ಲಿ ಪ್ರತ್ಯೇಕ ಸಾವಯವ ಕೃಷಿ ಪೆವಿಲಿಯನ್ ಸ್ಥಾಪಿಸಿ ರೈತರಿಗೆ ಹಾಗೂ ಗ್ರಾಹಕರಿಗೆ ಸಾವಯವ ಕೃಷಿಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಸಾವಯವ ಕೃಷಿಯಲ್ಲಿ ಯಾವುದೇ ರಸಾಯನಿಕ ಗೊಬ್ಬರ ಮತ್ತು ರಸಾಯನಿಕ ಪೀಡೆನಾಶಕಗಳ ಬಳಕೆಗೆ ಅವಕಾಶವಿರುವುದಿಲ್ಲ. ಬದಲಾಗಿ ಸಾವಯವ ಗೊಬ್ಬರಗಳು ಹಾಗೂ ಜೈವಿಕ ಪೀಡೆನಾಶಕಗಳನ್ನು ಬಳಸಬಹುದಾಗಿರುತ್ತದೆ. ರಾಜ್ಯದ ಕೃಷಿ ಇಲಾಖೆಯು ಈ ಸಂಬಂಧ ವಿವಿಧ ಯೋಜನೆಗಳಡಿ ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರ ಹಾಗೂ ಜೈವಿಕ ಪೀಡೆನಾಶಕಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಒದಗಿಸುತ್ತಿದೆ. |

**ಸಂಖ್ಯೆ: ಕೃಇ/ಕೃಇಕ/50/2020**

(ಬಿ.ಸಿ. ಪಾಟೀಲ್) 16/3/2020

**ಕೃಷಿ ಸಚಿವರು**

# ಅನುಬಂಧ

| ಕ್ರ.ಸಂ | ಒಕ್ಕೂಟದ ಹೆಸರು | ಒಕ್ಕೂಟದ ವ್ಯಾಪ್ತಿಯ ಜಿಲ್ಲೆ/ಜಿಲ್ಲೆಗಳು |
|---|---|---|
| 1. | ಬೆಳಗಾವಿ ಜಿಲ್ಲೆಯ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಬೆಳಗಾವಿ ಜಿಲ್ಲೆ |
| 2. | ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳು |
| 3. | ಉತ್ತರ ಕನ್ನಡ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಉತ್ತರ ಕನ್ನಡ ಜಿಲ್ಲೆ |
| 4. | ಹಾಸನ ಮತ್ತು ಕೊಡಗು ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಹಾಸನ ಮತ್ತು ಕೊಡಗು ಜಿಲ್ಲೆಗಳು |
| 5. | ದಕ್ಷಿಣಕನ್ನಡ, ಚಿಕ್ಕಮಗಳೂರು, ಉಡುಪಿ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ದಕ್ಷಿಣಕನ್ನಡ, ಚಿಕ್ಕಮಗಳೂರು, ಉಡುಪಿ ಜಿಲ್ಲೆಗಳು |
| 6. | ಧಾರವಾಡ, ಹಾವೇರಿ, ಗದಗ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಧಾರವಾಡ, ಹಾವೇರಿ, ಗದಗ ಜಿಲ್ಲೆಗಳು |
| 7. | ಕಲಬುರ್ಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಕಲಬುರ್ಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳು |
| 8. | ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳು |
| 9. | ಬಾಗಲಕೋಟೆ ಜಿಲ್ಲೆ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಬಾಗಲಕೋಟೆ ಜಿಲ್ಲೆ |
| 10. | ಶಿವಮೊಗ್ಗ ಜಿಲ್ಲೆಯ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಶಿವಮೊಗ್ಗ ಜಿಲ್ಲೆ |
| 11. | ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳು |
| 12. | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳು |
| 13. | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು |
| 14. | ತುಮಕೂರು ಜಿಲ್ಲೆಯ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ತುಮಕೂರು ಜಿಲ್ಲೆ |
| 15. | ವಿಜಯಪುರ ಜಿಲ್ಲೆ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿಯಮಿತ | ವಿಜಯಪುರ ಜಿಲ್ಲೆ |